ಕರ್ನಾಟಕ ಸರ್ಕಾರ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

2ನೇ ಮಹಡಿ, 3ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು-560001 ಇ-ಮೇಲ್: rdprrecruitment@gmail.com

ಕಡತ ಸಂಖ್ಯೆ:ಗ್ರಾಅಪ/09/ಇ-ಆಡಳಿತ/2025 ದಿನಾಂಕ:28.01.2025

## ಪ್ರಕಟಣೆ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಇ-ಆಡಳಿತ ಶಾಖೆಯ ರಾಜ್ಯ ಕಛೇರಿಗೆ ಕೆಳಕಂಡ ತಾತ್ಕಾಲಿಕ ಹುದ್ದೆಗೆ ಹೊರಗುತ್ತಿಗೆ ಆಧಾರದ ಮೇಲೆ ಸಮಾಲೋಚಕರನ್ನು ನೇಮಿಸಿಕೊಳ್ಳಲು ಅರ್ಜಿ ಕರೆಯಲಾಗಿದೆ. ಹುದ್ದೆಗಳ ವಿವರ, ವಿದ್ಯಾರ್ಹತೆ ಹಾಗೂ ಕಾರ್ಯಾನುಭವದ ವಿವರಗಳನ್ನು ಕೆಳಕಂಡಂತೆ ನೀಡಲಾಗಿದೆ.

| Sl. No. | Name of the Post | No of Posts | Minimum Qualification | Desired Experience |
|---|---|---|---|---|
| 1 | Technical Consultant | 1 | BE(CS, E&C, TC, IS)/MCA/B-Tech(CS, E&C, TC, IS) from any institute by the Government | 02 years experience in technical support with following skills:<br>• Experience in Technical projects.<br>• Domain knowledge of file process in Government organization.<br>• Experience in identifying issues and able to produce the traceability.<br>• Technical support experience with system integrating company is preferred.<br>• Support experience need to be in windows and Linux environment.<br>• Exposure to reporting and analytics is desired.<br>• Knowledge of Kannada and English to read and write is must. |

1. ಗುತ್ತಿಗೆಯ ಅಥವಾ ಹೊರಗುತ್ತಿಗೆ ಅವಧಿ: ಮೇಲಿನ ಹುದ್ದೆ ಸಂಪೂರ್ಣವಾಗಿ ತಾತ್ಕಾಲಿಕ ಹುದ್ದೆಯಾಗಿದ್ದು, ಒಂದು ವರ್ಷದ ಅವಧಿಗೆ ಹೊರಗುತ್ತಿಗೆಯ ಆಧಾರದ ಮೇಲೆ ನೇಮಿಸಿಕೊಳ್ಳಲಾಗುವುದು ನಂತರ ಕಾಲಕಾಲಕ್ಕೆ ಅವರ ಕಾರ್ಯಕ್ಷಮತೆಯನ್ನು ಪರಿಶೀಲಿಸಿ ಮತ್ತು ಅಗತ್ಯಕ್ಕೆ ಅನುಗುಣವಾಗಿ ನವೀಕರೀಸಲಾಗುವುದು. ಒಂದೊಮ್ಮೆ ಅಭ್ಯರ್ಥಿಯ ಕಾರ್ಯಕ್ಷಮತೆ ನಿರೀಕ್ಷಿತ ಮಟ್ಟದಲ್ಲಿ ಇಲ್ಲದಿದ್ದರೆ ಅಂತಹ ಅಭ್ಯರ್ಥಿಗಳ ಕರಾರು ಒಪ್ಪಂದವನ್ನು ಒಂದು ತಿಂಗಳ ನೋಟೀಸ್ ನೀಡಿ ರದ್ದುಪಡಿಸಲಾಗುವುದು.
2. ವಯೋಮಾನ:ಪ್ರಕಟಣೆ ಹೊರಡಿಸಿದ ದಿನಾಂಕಕ್ಕೆ 45 ವರ್ಷಗಳು ಮೀರಿರಬಾರದು.
3. ನಿಗದಿತ ಅರ್ಜಿ ನಮೂನೆಯಲ್ಲಿ ಮಾಹಿತಿಯನ್ನು ತುಂಬಿ, ವಯಸ್ಸಿನ ದೃಢೀಕರಣ, ವಿದ್ಯಾರ್ಹತೆ, ಅನುಭವ, ಪ್ರಮುಖ ಸಾಮರ್ಥ್ಯಗಳು. (Resume) ಅರ್ಜಿಯನ್ನು ನಿರ್ದೇಶಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, 2 ನೇ ಮಹಡಿ, 3ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು-560001 ಈ ವಿಳಾಸಕ್ಕೆ ಅರ್ಜಿಯ ಹಾರ್ಡ್ ಪ್ರತಿಯನ್ನು ದಿನಾಂಕ:11.02.2025 ರ ಸಂಜೆ 5:30 ಗಂಟೆಯೊಳಗೆ ಸಲ್ಲಿಸಬೇಕು.

ನಂತರ ಬಂದಂತಹ ಯಾವುದೇ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ. (ಅರ್ಜಿಯ ನಮೂನೆ & ToR ಪ್ರತಿ RDPR website:https://rdpr.karnataka.gov.in (ನೇಮಕಾತಿ ಲಿಂಕ್)ನಲ್ಲಿ ಲಭ್ಯವಿರುತ್ತದೆ.

4. ಸ್ನಾತಕ/ಸ್ನಾತಕೋತ್ತರ ಪದವಿಯನ್ನು ದೂರ ಶಿಕ್ಷಣ ಮುಖಾಂತರ ಪಡೆದಿದ್ದರೆ. ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ ಹಾಗೂ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

5. ಆಯ್ಕೆಯಾದ ಅಭ್ಯರ್ಥಿಯು ಹೊರಗುತ್ತಿಗೆ ಸಂಸ್ಥೆಯೊಂದಿಗೆ ನಿಗದಿತ ನಮೂನೆಯಲ್ಲಿ ಕರಾರು ಒಪ್ಪಂದವನ್ನು ಮಾಡಿಕೊಳ್ಳಬೇಕು ಹಾಗೂ ಕಾರ್ಯಾನುಭವದ ಆಧಾರದ ಮೇಲೆ ಮಾಸಿಕ ಸಮಾಲೋಚನಾ ಶುಲ್ಕ ನಿಗದಿಪಡಿಸಲಾಗುವುದು.

6. ಕರಾರು ಒಪ್ಪಂದ ಮಾಡಿಕೊಂಡ ಅಭ್ಯರ್ಥಿಗೆ ಇಲಾಖೆಯಲ್ಲಿನ ಯಾವುದೇ ಹುದ್ದೆಗಳಲ್ಲಿ ವಿಲೀನಗೊಳ್ಳಲು/ಮುಂದುವರೆಸಲು ಯಾವುದೇ ಹಕ್ಕು ಇರುವುದಿಲ್ಲ.

7. ಕಿರುಪಟ್ಟಿ ಮಾಡಿದ ಅಭ್ಯರ್ಥಿಗಳಿಗೆ (Shortlisted candidates) ಅವರುಗಳಿಗೆ ಮಾತ್ರ ದೂರವಾಣಿ ಮುಖಾಂತರ ತಿಳಿಸಲಾಗುವುದು.

8. ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನವನ್ನು ಕೇಂದ್ರ ಕಛೇರಿಯಲ್ಲಿ ನೇರ ಸಂದರ್ಶನ ಅಥವಾ ವಿಡಿಯೋ ಸಂವಾದದ ಮೂಲಕ ನಡೆಸಲಿದ್ದು, ನಿಗದಿಪಡಿಸಿದ ದಿನಾಂಕ ಮತ್ತು ವೇಳೆಯಲ್ಲಿ ಹಾಜರಾಗುವುದು.

9. ನೇಮಕಾತಿಯನ್ನು ಪೂರ್ಣವಾಗಿ ಮತ್ತು ಭಾಗಶ: ರದ್ದು ಮಾಡುವ/ಮುಂದೂಡುವ/ಬದಲಾವಣೆ ಮಾಡುವ ಹಕ್ಕನ್ನು ಇಲಾಖೆಯು ಹೊಂದಿರುತ್ತದೆ.

ಸಹಿ/-

ನಿರ್ದೇಶಕರು, ಇ-ಆಡಳಿತ

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ